ಖಾಲಿ ಇರುವ ಬೋಧಕರ ಹುದ್ದೆಗಳಿಗೆ ಹಾಗೂ ಕಾರ್ಯಾಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಂಡು ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಪಾಠ ಪ್ರವಚನಗಳನ್ನು ನಡೆಸಲಾಗುತ್ತಿದೆ. ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬೆರಳಚ್ಚುಗಾರರ ಹುದ್ದೆಗೆ ಹಾಗೂ ಗ್ರೂಪ್ ಡಿ ಹುದ್ದೆಗಳಿಗೆ ಕ್ರಮವಾಗಿ 88 ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಹಾಗೂ 347 ಗ್ರೂಪ್ ಡಿ ಸಿಬ್ಬಂದಿಗಳನ್ನು ಹೊರಗುತ್ತಿಗೆಯ ಆಧಾರದಲ್ಲಿ ನೇಮಕ ಮಾಡಿಕೊಳ್ಳಲಾಗಿದೆ.

ರಾಷ್ಟ್ರಕವಿ ಆಯ್ಕೆಯ ಪರಂಪರೆ

233(288); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ)

ಅ) ರಾಷ್ಟ್ರಕವಿಯಾಗಿದ್ದ ಜಿ.ಎಸ್. ಶಿವರುದ್ರಪ್ಪನವರ ನಿಧನದಿಂದ ಖಾಲಿಯಾಗಿರುವ ರಾಷ್ಟ್ರಕವಿ ಸ್ಥಾನವನ್ನು ತುಂಬಲು ಸರ್ಕಾರ ಕ್ರಮ ಕೈಗೊಂಡಿದೆಯೇ;

ಆ) ಹಾಗಿದ್ದಲ್ಲಿ, ವಿವರ ನೀಡುವುದು;

ಇ) ರಾಷ್ಟ್ರಕವಿ ಆಯ್ಕೆಗೆ ಅನುಸರಿಸುತ್ತಿರುವ ಮಾನದಂಡವೇನು;

ಈ) ರಾಷ್ಟ್ರಕವಿ ಸ್ಥಾನದ ಅಗತ್ಯವಿದೆಯೇ;

ಉ) ರಾಷ್ಟ್ರಕವಿ ಆಯ್ಕೆಯ ಪರಂಪರೆಯನ್ನು ನಿಲ್ಲಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು

ಆ) ಸರ್ಕಾರದ ಆದೇಶ ಸಂಖ್ಯೆ.ಕಸಂವಾ 740 ಕಸಧ 2014(ಭಾ) ದಿನಾಂಕ:28–11–2014ರಲ್ಲಿ ಕನ್ನಡದ ರಾಷ್ಟ್ರ ಕವಿ ಪುರಸ್ಕಾರಕ್ಕೆ ನಾಡಿನ ಹಿರಿಯ ಕವಿಯೊಬ್ಬರನ್ನು ಆಯ್ಕೆ ಮಾಡುವ ಸಲುವಾಗಿ ಈ ಕೆಳಕಂಡ ತಜ್ಞರ ಸಮಿತಿಯನ್ನು ರಚಿಸಿ ಆದೇಶಿಸಿದೆ.

1	ಡಾ॥ ಕೊ. ಚನ್ನಬಸಪ್ಪ, ಬಳ್ಳಾರಿ	ಅಧ್ಯಕ್ಷರು
2	ಶ್ರೀ ಪುಂಡಲೀಕ ಹಾಲಂಬಿ ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು	ಸದಸ್ಯರು
3	ಡಾ॥ ಹೆಚ್.ಎಲ್. ಪುಷ್ಪ ಬೆಂಗಳೂರು	ಸದಸ್ಯರು
4	ಪ್ರೊ. ಎಸ್.ಜಿ. ಸಿದ್ಧರಾಮಯ್ಯ	ಸದಸ್ಯರು
5	ಡಾ॥ ವಿಷ್ಣು ನಾಯ್ಕ, ಉತ್ತರ ಕನ್ನಡ	ಸದಸ್ಯರು
6	ಶ್ರೀಮತಿ ರೂಪಾ ಹಾಸನ, ಹಾಸನ	ಸದಸ್ಯರು
7	ಶ್ರೀ ಪ್ರಭು ಖಾನಾಪುರೆ, ಗುಲ್ಬರ್ಗಾ	ಸದಸ್ಯರು
8	ಡಾ॥ ಕಾಳೇಗೌಡ ನಾಗವಾರ, ಮೈಸೂರು	ಸದಸ್ಯರು
9	ಡಾ॥ ಕೆ. ಶರೀಫ, ಹರಿಹರ	ಸದಸ್ಯರು
10	ಡಾ॥ ಗಿರಡ್ಡಿ ಗೋವಿಂದ ರಾಜು, ಧಾರವಾಡ	ಸದಸ್ಯರು
11	ಡಾ॥ ಎಲ್. ಹನುಮಂತಯ್ಯ ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು	ಪದನಿಮಿತ್ತ ಸದಸ್ಯರು
12	ಡಾ॥ ಬಂಜಗೆರೆ ಜಯಪ್ರಕಾಶ್, ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು	ಪದನಿಮಿತ್ತ ಸದಸ್ಯರು
13	ಡಾ॥ ಮಾಲತಿ ಪಟ್ಟಣ ಶೆಟ್ಟಿ ಅಧ್ಯಕ್ಷರು, ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು	ಪದನಿಮಿತ್ತ ಸದಸ್ಯರು
14	ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು	ಸದಸ್ಯ ಕಾರ್ಯದರ್ಶಿ

ಇ) ಅನುಬಂಧದಲ್ಲಿ ನೀಡಲಾಗಿದೆ.

ಈ) "ರಾಷ್ಟ್ರಕವಿ" ಎಂಬುದು ಒಂದು ಗೌರವ ಸೂಚಕ ಪುರಸ್ಕಾರವಾಗಿದೆ. ಸ್ವಾತಂತ್ರ ಪೂರ್ವದಿಂದಲೂ ರಾಷ್ಟ್ರ ಕವಿ ಪುರಸ್ಕಾರವನ್ನು ನೀಡುತ್ತಾ ಬಂದಿರುವ ಸಂಪ್ರದಾಯವನ್ನು ಮುಂದುವರೆಸಿಕೊಂಡು ಬರಲಾಗುತ್ತಿದೆ.

ಉ) ಇಲ್ಲ.

ಬೋಧಕೇತರ ಸಿಬ್ಬಂದಿಗಳ ನಿಯೋಜನೆ ರದ್ದುಪಡಿಸುವುದು

234(488); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ (ರೋಣ)

ಅ) ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ನೇಮಕಾತಿ ಹೊಂದಿ ಪದವಿ ಪೂರ್ವ ಕಾಲೇಜುಗಳಿಗೆ ನಿಯೋಜನೆಗೊಂಡಿರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ;

ಆ) ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಇ) ಈ ಹಿಂದೆ ಕಾಲೇಜು ಶಿಕ್ಷಣ ಇಲಾಖೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ ನಿಯೋಜನೆಗೊಂಡಿರುವ ಬೋಧಕೇತರ ಸಿಬ್ಬಂದಿಗಳು ಬಡ್ತಿ, ಪದೋನ್ನತಿ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಬೋಧಕೇತರ ಸಿಬ್ಬಂದಿಗಳ ನಿಯೋಜನೆಯನ್ನು ರದ್ದುಪಡಿಸಿ, ಪುನಃ ಕಾಲೇಜು ಶಿಕ್ಷಣ ಇಲಾಖೆಗೆ ಅವರ ಸೇವೆಯನ್ನು ಹಿಂಪಡೆಯುವ ಬಗ್ಗೆ ಸರ್ಕಾರವು ಚಿಂತನೆ ನಡೆಸಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಒಟ್ಟು – 360